# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☎:0816-2255650, 2273511,ಫ್ಯಾಕ್ಸ್ :0816-2270719

ಸಂಖ್ಯೆ : ತು.ವಿ.: ಪ.ವಿ.:2023-24/ 988 ದಿನಾಂಕ: 09.01.2024

## ಅಧಿಸೂಚನೆ

ವಿಷಯ: ಎಂ.ಸಿ.ಎ ಮತ್ತು ಎಂ.ಬಿ.ಎ ಸ್ನಾತಕೋತ್ತರ ಪದವಿ ಪರೀಕ್ಷೆಗಳ (CBCS-EMS & UUCMS) ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್ ಉತ್ತರ ಪತ್ರಿಕೆಗಳ ಛಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಕುರಿತು.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2023 ರ ಅಕ್ಟೋಬರ್/ನವೆಂಬರ್ಮಾಹೆಗಳಲ್ಲಿ ನಡೆದ ಎಂ.ಸಿ.ಎ ಮತ್ತು ಎಂ.ಬಿ.ಎ ಸ್ನಾತಕೋತ್ತರ ಪದವಿ ಪರೀಕ್ಷೆಗಳ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್ (ನವೀನ ಮತ್ತು ಪೂರಕ) ಸೆಮಿಸ್ಟರ್ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಛಾಲೆಂಜ್ ಮೌಲ್ಯಮಾಪನಕ್ಕೆ ಅವಕಾಶ ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳು ಸಂಬಂಧಪಟ್ಟ ವಿಭಾಗಗಳಲ್ಲಿ/ಕಾಲೇಜುಗಳಲ್ಲಿ ವಿಭಾಗದ ಮುಖ್ಯಸ್ಥರು/ಪ್ರಾಂಶುಪಾಲರ ಮುಖಾಂತರ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವುದು ಮತ್ತು ವಿಭಾಗ/ ಕಾಲೇಜಿನವರು ಸದರಿ ಮಾಹಿತಿಯನ್ನು ಈ ಕೆಳಗೆ ನೀಡಿದ ದಿನಾಂಕದೊಳಗೆ ಕುಲಸಚಿವರು (ಪರೀಕ್ಷಾಂಗ). ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಸಲ್ಲಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

| | |
|---|---|
| ಛಾಲೆಂಜ್ ಮೌಲ್ಯಮಾಪನದ ಶುಲ್ಕ ಪ್ರತಿ ವಿಷಯಕ್ಕೆ (Per Paper) | ರೂ. 1,310-00 |
| ವಿದ್ಯಾರ್ಥಿಗಳು ಛಾಲೆಂಜ್ ಮೌಲ್ಯಮಾಪನಕ್ಕೆ ಕಾಲೇಜು/ವಿಭಾಗದಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | 10.01.2024 |
| ವಿದ್ಯಾರ್ಥಿಗಳು ಛಾಲೆಂಜ್ ಮೌಲ್ಯಮಾಪನಕ್ಕೆ ಕಾಲೇಜು/ವಿಭಾಗದಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ | 17.01.2024 |
| ವಿಭಾಗ/ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | 18.01.2024 |
| ಛಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ವಿಭಾಗ/ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕಡೆಯ ದಿನಾಂಕ | 19.01.2024 |

**ವಿಶೇಷ ಸೂಚನೆ:-**

- ಯು.ಯು.ಸಿ.ಎಂ.ಎಸ್. ತಂತ್ರಾಂಶದಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಯು.ಯು.ಸಿ.ಎಂ.ಎಸ್. ತಂತ್ರಾಂಶದಲ್ಲಿಯೇ ಶುಲ್ಕ ಪಾವತಿಸತಕ್ಕದ್ದು.
- ಸಿ.ಬಿ.ಸಿ.ಎಸ್ ವಿದ್ಯಾರ್ಥಿಗಳು ತುಮಕೂರು ವಿಶ್ವವಿದ್ಯಾನಿಲಯ (tumkuruniversity.ac.in) ವೆಬ್‌ಸೈಟ್‌ನಲ್ಲಿ ಎಸ್.ಬಿ.ಐ. ಕಲೆಕ್ಟ್ ಮುಖಾಂತರ ಶುಲ್ಕ ಪಾವತಿಸಿ ಸಂಬಂಧಪಟ್ಟ ವಿಭಾಗ/ಕಾಲೇಜುಗಳಿಗೆ ಸಲ್ಲಿಸುವುದು.
- ಛಾಲೆಂಜ್ ಮೌಲ್ಯಮಾಪನದಲ್ಲಿ ಪಡೆದ ಅಂಕಗಳೇ ಅಂತಿಮವಾಗಿರುತ್ತದೆ. ಕಡೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

10/1/23

ಕುಲಸಚಿವರು(ಪರೀಕ್ಷಾಂಗ)

ಗೆ,

ನಿರ್ದೇಶಕರು / ಮುಖ್ಯಸ್ಥರು/ಸಂಯೋಜಕರು/ಪ್ರಾಂಶುಪಾಲರು/ ವಿವಿಧ ಸ್ನಾತಕೋತ್ತರ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಂ ಅನಾಲಿಸಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಛೇರಿ ಪ್ರತಿ.